ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು–560065

*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

ದಿನಾಂಕ: 24.11.2023

# ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

## ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)
## (ದಿನಾಂಕ 25-11-2023 ರಿಂದ 29-11-2023 ವರೆಗೆ)

| ನಿಯತಾಂಕಗಳು | 25.11.2023 | 26.11.2023 | 27.11.2023 | 28.11.2023 | 29.11.2023 |
|---|---|---|---|---|---|
| ಮಳೆ (ಮಿ ಮಿ) | 5 | 4 | 3 | 3 | 0 |
| ಗರಿಷ್ಠ ಉಷ್ಣಾಂಶ (ಡಿ.ಸೆ. ) | 27 | 27 | 27 | 29 | 28 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 19 | 19 | 18 | 18 |
| ಮೋಡ (ಪ್ರಮಾಣ) | 7 | 7 | 7 | 4 | 4 |
| ಆರ್ದ್ರತೆ 7.20 ಬೆ (ಶೇ) | 94 | 94 | 94 | 92 | 92 |
| ಆರ್ದ್ರತೆ 2.20 ಮ (ಶೇ) | 86 | 86 | 86 | 84 | 84 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 2 | 3 | 2 | 2 | 2 |
| ಗಾಳಿಯ ದಿಕ್ಕು (ಡಿಗ್ರಿ) | 112 | 103 | 90 | 90 | 72 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ 27.0–29.0$^{o}$ C ಮತ್ತು ಕನಿಷ್ಠ 18.0–20.0$^{o}$ C ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **92-94 %** ಇದ್ದು ಮಧ್ಯಾಹ್ನ **84-86 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 2–3 ಕಿ.ಮೀ. ವೇಗದಲ್ಲಿ ಬೀಸುವ ಸ೦ಭವವಿದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| **ಸಾಮಾನ್ಯ** | | ➢ ಹಿಂಗಾರು ಬೆಳೆಗಳನ್ನು ಬಿತ್ತಲು ಭೂಮಿಯನ್ನು ಸಿದ್ಧತೆ ಮಾಡಿಕೊಳ್ಳಿ.<br>➢ ಗೊಬ್ಬರದ ಗಿಡಗಳನ್ನು ಮತ್ತು ಕಳೆಗಿಡಗಳನ್ನು ಭೂ ಹೊದಿಕೆಯಾಗಿ ಬೆಳೆಗಳಿಕೆ ಹಾಕಿ ಇದರಿಂದ ಗೊಬ್ಬರ ಮತ್ತು ತೇವಾಂಶದ ಸಂರಕ್ಷಣೆಯಾಗುತ್ತದೆ. |
| **ಮುಂಗಾರು ಬೆಳೆಗಳು** | ಮಾಗುವ ಮತ್ತು ಕಟಾವು ಹಂತ | **ಈ ಕೆಳಗಿನ ಕಡಿಮೆ ಅವಧಿ ಹಿಂಗಾರು ಬೆಳೆ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>➢ ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ–ಎಚ್.ಎ–3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್–1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1,<br>➢ ರಾಗಿ ತೆನೆಯನ್ನು ಕಟಾವು ಮಾಡಿ ಬಿಸಿಲು ಬಂದ ಮೇಲೆ ಒಣಗಿಸಿ ಶೇಖರಿಸಿ.<br>➢ ಹಗುರ ಮಳೆಯ ಅವಕಾಶ ಇರುವುದರಿಂದ ರಾಗಿ ಗಿಡವನ್ನು ಕಟಾವು ಮಾಡುವುದನ್ನು ಕೆಲ ದಿನಗಳ ಕಾಲ ಮುಂದೂಡಿ.<br>➢ ತೊಗರಿ ಬೆಳೆಯಲ್ಲಿ ಚೆನ್ನಾಗಿ ಬಲಿತಿರುವ ಕಾಯಿಯನ್ನು ಕಟವು ಮಾಡಿ ಬಿಸಿಲು ಬಂದ ಮೇಲೆ ಒಣಗಿಸಿ ಶೇಖರಿಸಿ. |
| **ಪಶುಸಂಗೋಪನೆ** | | ➢ ಬಿಸಿಲು, ಮಳೆ ಮತ್ತು ಬೀಸುವ ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು (ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಪ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮುನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.